**All India Radio: Bangalore**
**Regional Bulletin In Kannada**
**12.06.2025 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**<><><><>**

ಮುಖ್ಯಾಂಶಗಳು

1. ಗುಜರಾತ್‌ನ ಅಹಮದಾಬಾದ್‌ನಲ್ಲಿ ಏರ್‌ಇಂಡಿಯಾ ಪ್ರಯಾಣಿಕ ವಿಮಾನ ಪತನ
2. ರಾಜ್ಯದಲ್ಲಿ ಜಾತಿ ಗಣತಿ ಮರು ಸಮೀಕ್ಷೆಗೆ ಸಂಪುಟ ಸಭೆಯಲ್ಲಿ ಒಪ್ಪಿಗೆ - ಮುಖ್ಯಮಂತ್ರಿ ಸಿದ್ದರಾಮಯ್ಯ
3. ರಾಜ್ಯದ ಹಲವೆಡೆ ಧಾರಾಕಾರ ಮಳೆ ; ಹುಬ್ಬಳ್ಳಿ, ಉತ್ತರಕನ್ನಡ ಜಿಲ್ಲೆಯಲ್ಲಿ ಜನಜೀವನ ಅಸ್ತವ್ಯಸ್ತ
4. ಚಿನ್ನಸ್ವಾಮಿ ಕ್ರೀಡಾಂಗಣ ಬಳಿ ಕಾಲ್ತುಳಿತ ಪ್ರಕರಣ : ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗ ಮಧ್ಯಪ್ರವೇಶಕ್ಕೆ ಪ್ರತಿಪಕ್ಷ ನಾಯಕ ಆರ್. ಅಶೋಕ ಮನವಿ
5. ರಾಜ್ಯದ ತೋತಾಪುರಿ ಮಾವಿನ ಹಣ್ಣುಗಳಿಗೆ ಆಂಧ್ರಪ್ರದೇಶದಲ್ಲಿ ನಿಷೇಧ ತೆರವುಗೊಳಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ರ

<><><><>

ಅಹಮದಾಬಾದ್‌ನ ವಿಮಾನ ನಿಲ್ದಾಣ ಬಳಿ ಇರುವ ಮೇಘನಿ ಪ್ರದೇಶದಲ್ಲಿ ಏರ್‌ಇಂಡಿಯಾ ಪ್ರಯಾಣಿಕ ವಿಮಾನವೊಂದು ಪತನವಾಗಿದೆ. ವಿಮಾನ ಟೇಕ್‌ಆಫ್ ಆಗುತ್ತಿದ್ದಂತೆ ಪತನವಾಗಿದ್ದು, ಪತನವಾಗುತ್ತಿದ್ದಂತೆ ದಟ್ಟ ಹೊಗೆ ಆವರಿಸಿಕೊಂಡಿದೆ. ಈ ವಿಷಯವನ್ನು ಏರ್ ಇಂಡಿಯಾ ಸಮಾಜಿಕ ಜಾಲತಾಣದಲ್ಲಿ ದೃಢಪಡಿಸಿದೆ. ವಿಮಾನದಲ್ಲಿ ೨೪೨ ಪ್ರಯಾಣಿಕರು ಪ್ರಯಾಣಿಸುತ್ತಿದ್ದರು ಎನ್ನಲಾಗುತ್ತಿದೆ. ಈ ವಿಮಾನ ಅಹಮದಾಬಾದ್‌ನಿಂದ ಲಂಡನ್‌ಗೆ ತೆರಳುತ್ತಿದ್ದಾಗ ಘಟನೆ ಸಂಭವಿಸಿದೆ. ಗಾಯಾಳುಗಳನ್ನು ಅಹಮದಾಬಾದ್‌ನ ಸಿವಿಲ್ ಆಸ್ಪತ್ರೆಗೆ ದಾಖಲಿಸಲಾಗಿದೆ. ಕೂಡಲೇ ಅಗ್ನಿಶಾಮಕ ಸಿಬ್ಬಂದಿ ಹಾಗೂ ರಕ್ಷಣಾ ತಂಡಗಳು ಘಟನಾ ಸ್ಥಳಕ್ಕೆ ಧಾವಿಸಿ ರಕ್ಷಣಾ ಕಾರ್ಯದಲ್ಲಿ ತೊಡಗಿದ್ದಾರೆ ಹಾಗೂ ಪರಿಹಾರ ಕಾರ್ಯಾಚರಣೆಗೆ ಅನುಕೂಲವಾಗುವಂತೆ ಅಪಘಾತ ಸ್ಥಳಕ್ಕೆ ತೆರಳುವ ಎಲ್ಲ ರಸ್ತೆಗಳನ್ನು ಮುಚ್ಚಲಾಗಿದೆ ಎಂದು ನಮ್ಮ ಪ್ರತಿನಿಧಿ ವರದಿ ಮಾಡಿದ್ದಾರೆ. ಈ ಕುರಿತಂತೆ ಹೆಚ್ಚಿನ ಮಾಹಿತಿ ನಿರೀಕ್ಷಿಸಲಾಗುತ್ತಿದೆ.

<><><><>

ಜಾತಿಗಣತಿ ಮರು ಸಮೀಕ್ಷೆಗೆ ಇಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಒಪ್ಪಿಗೆ ದೊರೆತಿದೆ. ಸಂಪುಟ ಸಭೆಯ ಬಳಿಕ ವಿಧಾನಸೌಧದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಜಾತಿಗಣತಿ ಮರು ಸಮೀಕ್ಷೆಗೆ ಸಚಿವ ಸಂಪುಟ ಸಭೆಯಲ್ಲಿ ಒಪ್ಪಿಗೆ ದೊರೆತಿದೆ ಎಂದು ಹೇಳಿದ್ದಾರೆ. ೫೪ ಮಾನದಂಡಗಳನ್ನು ಇಟ್ಟುಕೊಂಡು ಹೋಗಿ ಮನೆ ಮನೆ ಸಮೀಕ್ಷೆ ನಡೆಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ಹೈಕಮಾಂಡ್ ನೀಡಿದ ಸೂಚನೆ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಈ ನಿರ್ಧಾರ ಕೈಗೊಂಡಿದೆ.

<><><>

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಜಾತಿ ಗಣತಿ ವಿಚಾರದಲ್ಲಿ ಸರಿಯಾದ ಸ್ಪಷ್ಟತೆ ನೀಡಬೇಕು ಎಂದು ಉಡುಪಿ - ಚಿಕ್ಕಮಗಳೂರು ಕ್ಷೇತ್ರದ ಸಂಸದ ಕೋಟಾ ಶ್ರೀನಿವಾಸ ಪೂಜಾರಿ ಆಗ್ರಹಿಸಿದ್ದಾರೆ. ಚಿಕ್ಕಮಗಳೂರಿನಲ್ಲಿ ಮಾತನಾಡಿದ ಅವರು ಸಿದ್ದರಾಮಯ್ಯನವರೇ ಜಾತಿ ಗಣತಿಗೆ ೨೦೦ ಕೋಟಿ ರೂಪಾಯಿ ಬಿಡುಗಡೆ ಮಾಡಿದ್ದು ೧೬೧ ಕೋಟಿ ರೂಪಾಯಿ ಖರ್ಚಾಗಿದೆ ಎಂದು ಹೇಳಿ, ಇದೀಗ ಜಾತಿ ಜನಗಣತಿಯನ್ನು ವಾಪಸ್ ಪಡೆಯುವುದಾಗಿ ಹೇಳುತ್ತಿರುವುದು ಹಾಸ್ಯಸ್ಪದವಾಗಿದೆ ಎಂದು ತಿಳಿಸಿದ್ದಾರೆ.

<><><>

ಕರಾವಳಿ ಹಾಗೂ ರಾಜ್ಯದ ಹಲವೆಡೆ ಮಳೆಯಾಗುತ್ತಿದೆ. ಉತ್ತರಕನ್ನಡ ಜಿಲ್ಲೆಯ ಕಾರವಾರ, ಅಂಕೋಲಾ, ಕುಮಟಾ ಹಾಗೂ ಭಟ್ಕಳ ತಾಲೂಕುಗಳಲ್ಲಿ ಭಾರೀ ಮಳೆ ಸುರಿಯುತ್ತಿದ್ದು, ಜನಜೀವನ ಅಸ್ತವ್ಯಸ್ತವಾಗಿದೆ. ಕಳೆದ ರಾತ್ರಿಯಿಂದ ಸುರಿಯುತ್ತಿರುವ ನಿರಂತರ ಮಳೆಗೆ ಕಾರವಾರದ ಮುಖ್ಯ ರಸ್ತೆಗಳಲ್ಲಿ ನೀರು ನಿಂತು ಜನ, ವಾಹನ ಸಂಚಾರಕ್ಕೆ ಅಡಚಣೆಯುಂಟಾಗಿದೆ. ಜಿಲ್ಲಾಸ್ಪತ್ರೆಯ ನೆಲ ಮಹಡಿಯೂ ಜಲಾವೃತಗೊಂಡಿದ್ದರಿಂದ ರೋಗಿಗಳು ತೊಂದರೆ ಅನುಭವಿಸುವಂತಾಯಿತು. ನಗರದ ಬಸ್ ಡಿಪೋದಲ್ಲೂ ಭಾರೀ ಪ್ರಮಾಣದಲ್ಲಿ ನೀರು ನಿಂತು ಸಿಬ್ಬಂದಿ ಪರದಾಡುವಂತಾಗಿದೆ. ಡೋಭಿಘಾಟ ಬಳಿ ಕಳೆದ ರಾತ್ರಿ ಗುಡ್ಡ ಕುಸಿತ ಸಂಭವಿಸಿದೆ. ಹುಬ್ಬಳ್ಳಿಯಲ್ಲಿ ಕಳೆದ ರಾತ್ರಿಯಿಂದ ಸುರಿದ ಬಾರಿ ಮಳೆಯಿಂದಾಗಿ ಇಡೀ ಹುಬ್ಬಳ್ಳಿ ಕೆರೆಯಂತಾಗಿದೆ. ರಸ್ತೆಗಳೆಲ್ಲಾ ಮುಳುಗಿ ನದಿಯಂತೆ ನೀರು ಹರಿಯುತ್ತಿದೆ. ಇದರಿಂದ ಜನರ ಜೀವನ ಅಸ್ತವ್ಯಸ್ತವಾಗಿದೆ. ಆಟೋ, ಬೈಕ್‌ಗಳು ನೀರಲ್ಲಿ ಮುಳುಗಿ ಹೋಗಿವೆ. ಧಾರವಾಡ ಜಿಲ್ಲೆಯಲ್ಲಿ ಧಾರಾಕಾರ ಮಳೆಯಾಗುತ್ತಿರುವ ಕಾರಣ ಗ್ರಾಮೀಣ ಭಾಗದಲ್ಲೂ ಸಾಕಷ್ಟು ಅವಾಂತರ ಸೃಷ್ಟಿಯಾಗಿದೆ. ಧಾರವಾಡ ಜಿಲ್ಲೆಯ ನವಲಗುಂದ ತಾಲೂಕಿನ ಯಮನೂರ ಗ್ರಾಮದಲ್ಲಿ ಸಾಕಷ್ಟು ಮನೆಗಳಿಗೆ ನೀರು ನುಗ್ಗಿದೆ. ಮುನ್ನೆಚ್ಚರಿಕಾ ಕ್ರಮವಾಗಿ ಇಂದು ಶಾಲಾ-ಕಾಲೇಜುಗಳಿಗೆ ಜಿಲ್ಲಾಧಿಕಾರಿ ದಿವ್ಯ ಪ್ರಭು ರಜೆ ಘೋಷಿಸಿದ್ದಾರೆ. ದಾವಣಗೆರೆ ಜಿಲ್ಲಾದ್ಯಂತ ವ್ಯಾಪಕ

ಮಳೆಯಾಗುತ್ತಿದ್ದು, ಜನಜೀವನ ಬಾಧಿತ ಗೊಂಡಿದೆ. ನಿನ್ನೆಯಿಂದ ನಿರಂತರವಾಗಿ ಸುರಿಯುತ್ತಿರುವ ಮಳೆಯಿಂದಾಗಿ ಕೃಷಿ ಚಟುವಟಿಕೆಗಳು ಸ್ಥಗಿತಗೊಂಡಿವೆ. ಈ ಮಧ್ಯೆ ಮಲೇಬೆನ್ನೂರು ಸಮೀಪದ ಕೊಮಾರನಹಳ್ಳಿಯಲ್ಲಿ ಸಿಡಿಲು ಬಡಿದ ಪರಿಣಾಮ ಕೊಟ್ಟಿಗೆಯಲ್ಲಿದ್ದ ನಾಲ್ಕು ಹಸುಗಳು ಸಾವನ್ನಪ್ಪಿವೆ. ಹಲವೆಡೆ ಸುರಿದ ಮಳೆಯಿಂದಾಗಿ ತರಕಾರಿ ಮತ್ತು ತೋಟಗಾರಿಕಾ ಬೆಳೆಗಳಿಗೆ ಹಾನಿಯಾಗಿದೆ. ಗದಗ ಜಿಲ್ಲೆಯ ಲಕ್ಷ್ಮೇಶ್ವರ ಮತ್ತು ರೋಣ ತಾಲೂಕಿನಲ್ಲಿ ಇಂದು ಬೆಳಗಿನ ಜಾವದವರೆಗೆ ಮಳೆಯಾಗಿದೆ. ಬೆಣ್ಣೆಹಳ್ಳದ ನೀರು ಅಪಾಯದ ಮಟ್ಟ ಮೀರಿ ಹರಿಯುತ್ತಿದೆ. ಯಾವಗಲ್ ಗ್ರಾಮದ ರೈತರು ಮುಂಗಾರು ಹಂಗಾಮಿನಲ್ಲಿ ಬಿತ್ತನೆ ಮಾಡಿದ ಈರುಳ್ಳಿ, ಶೇಂಗಾ, ಹೆಸರು ಮತ್ತು ಮೆಣಸಿನಕಾಯಿ ಬೆಳೆಗಳು ಜಲಾವೃತಗೊಂಡಿವೆ.

<><><>

ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ನಡೆದ ಕಾಲ್ತುಳಿತ ಪ್ರಕರಣದ ಬಗ್ಗೆ ಮಧ್ಯಸ್ಥಿಕೆ ವಹಿಸುವಂತೆ ವಿರೋಧ ಪಕ್ಷದ ನಾಯಕ ಆರ್. ಅಶೋಕ, ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗಕ್ಕೆ ಪತ್ರ ಬರೆದಿದ್ದಾರೆ. ಸಂತ್ರಸ್ಥರು ಮತ್ತು ಅವರ ಕುಟುಂಬಗಳಿಗೆ ಪಾರದರ್ಶಕತೆ ನ್ಯಾಯ ದೊರಕುವಂತಾಗಲು ತನಿಖೆಯ ಮೇಲ್ವಿಚಾರಣೆ ನಡೆಸುವಂತೆ ಒತ್ತಾಯಿಸಿದ್ದಾರೆ. ಸಂತ್ರಸ್ಥರಿಗೆ ನ್ಯಾಯ ಒದಗಿಸುವುದು ಹಾಗೂ ಇಂತಹ ಘಟನೆಗಳು ಮರುಕಳಿಸದಂತೆ ತಡೆಯುವುದು ಎಲ್ಲರ ಕರ್ತವ್ಯವಾಗಿದೆ ಎಂದು ಪತ್ರದಲ್ಲಿ ಉಲ್ಲೇಖಿಸಿದ್ದಾರೆ. ಈ ನಡುವೆ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಕಾಲ್ತುಳಿತದಿಂದ ಸಮಸ್ಯೆಗೆ ಒಳಗಾದ ಮಕ್ಕಳ ವಿವರವನ್ನು ಕೋರಿ ಸಿಐಡಿಗೆ ಮಕ್ಕಳ ಹಕ್ಕು ಆಯೋಗ ನೋಟಿಸ್ ಜಾರಿ ಮಾಡಿದೆ. ಸಾರ್ವಜನಿಕ ದೂರು ಆಧರಿಸಿ ಸ್ವಯಂಪ್ರೇರಿತ ದೂರು ದಾಖಲಿಸಿಕೊಂಡಿರುವ ಆಯೋಗ ಈ ಬಗ್ಗೆ ಹೆಚ್ಚಿನ ನಿಖರ ಮಾಹಿತಿ ನೀಡುವಂತೆ ತಿಳಿಸಿದೆ.

<><><>

ಕರ್ನಾಟಕದ ತೋತಾಪುರಿ ಮಾವಿನ ಹಣ್ಣುಗಳಿಗೆ ಆಂಧ್ರಪ್ರದೇಶದ ಚಿತ್ತೂರು ಜಿಲ್ಲಾಧಿಕಾರಿ ವಿಧಿಸಿರುವ ನಿಷೇಧ ಆದೇಶ ರದ್ದು ತೆರವುಗೊಳಿಸಬೇಕೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಆಂಧ್ರಪ್ರದೇಶದ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಅವರಿಗೆ ಪತ್ರ ಮೂಲಕ ಮನವಿ ಮಾಡಿದ್ದಾರೆ. ಇದು ಮುಂದಿನ ದಿನಗಳಲ್ಲಿ ತರಕಾರಿಗಳು ಮತ್ತು ಇತರ ಕೃಷಿ ಸರಕುಗಳ ಅಂತಾರಾಜ್ಯ ಸಾಗಾಣೆಗೆ ಅಡ್ಡಿ ಉಂಟುಮಾಡುವ ಸಾಧ್ಯತೆಯಿದೆ ಎಂದು ಕಳವಳ ವ್ಯಕ್ತಪಡಿಸಿದ್ದಾರೆ. ಈ ನಿರ್ಬಂಧವು ಸಾವಿರಾರು ರೈತರ ಜೀವನ ಉಪಾಯದ ಮೇಲೆ ನೇರ ಪರಿಣಾಮ ಬೀರಲಿದೆ ಎಂದು ತಿಳಿಸಿದ್ದಾರೆ.

<><><>

ರಾಜ್ಯ ಸರ್ಕಾರ ಇಂದು ಕೆಲವು ಐಎಎಸ್ ಹಾಗೂ ಐಪಿಎಸ್ ಅಧಿಕಾರಿಗಳನ್ನು ವರ್ಗಾವಣೆ ಮಾಡಿ ಆದೇಶ ಹೊರಡಿಸಿದೆ. ಐಪಿಎಸ್ ಅಧಿಕಾರಿ ಡಿ. ರೂಪಾ ಅವರನ್ನು ಬೆಂಗಳೂರು ಮೆಟ್ರೋ

ಪಾಲಿಟನ್ ಟಾಸ್ಕ್‌ಫೋರ್ಸ್ ಎಡಿಜಿಪಿ ಯಾಗಿ ವರ್ಗಾವಣೆ ಮಾಡಿದೆ. ಕೆಎಸ್‌ಆರ್‌ಟಿಸಿ ಮಹಾನಿರ್ದೇಶಕರನ್ನಾಗಿ ಅಕ್ರಂ ಪಾಶಾ ಅವರನ್ನು ನೇಮಕ ಮಾಡಲಾಗಿದೆ. ಇದೇ ವೇಳೆ ಐಎಎಸ್ ಅಧಿಕಾರಿ ರೋಹಿಣಿ ಸಿಂಧೂರಿಯವರನ್ನು ಕಾರ್ಮಿಕ ಇಲಾಖೆಯ ಕಾರ್ಯದರ್ಶಿ ಹುದ್ದೆಗೆ ವರ್ಗಾವಣೆ ಮಾಡಲಾಗಿದೆ.

<><><><>

ತುಂಗಭದ್ರಾ ಜಲಾಶಯದ ಎಡದಂಡೆ ಕಾಲುವೆಯ ಪ್ರದೇಶದಲ್ಲಿ ಪದೇ ಪದೇ ಭತ್ತ ಬೆಳೆಯುವುದರಿಂದ ಇಲ್ಲಿನ ಭೂಮಿ ಸವಳು ಮತ್ತು ಜವಳು ಆಗಲಿದ್ದು ಇದನ್ನು ತಡೆಯಲು ರೈತರು ತೋಟಗಾರಿಕೆ ಬೆಳೆಯಾದ ತಾಳೆ ಮತ್ತು ದ್ವಿದಳ ಧಾನ್ಯಗಳನ್ನು ಬೆಳೆಯ ಬೇಕು ಎಂದು ಐಸಿಎ ಆರ್ ನ ವಿಜ್ಞಾನಿ ಡಾ.ಮನು ಬಲರಾಮ್ ತಿಳಿಸಿದ್ದಾರೆ. ವಿಕಸಿತ ಕೃಷಿ ಸಂಕಲ್ಪ ಅಭಿಯಾನದ ನಿಮಿತ್ತ ಗಂಗಾವತಿ ತಾಲ್ಲೂಕಿನ ಸಾಣಾಪುರ ಗ್ರಾಮ ಪಂಚಾಯತಿ ತಿರುಮಲಾಪುರ ಗ್ರಾಮದಲ್ಲಿ ನಡೆದ ೧೪ ನೇ ದಿನದ ಅಭಿಯಾನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

**ಧ್ವನಿ : ಡಾ.ಮನು ಬಲರಾಮ್ ಕೃಷಿ ವಿಜ್ಞಾನಿ ಐಸಿಎಆರ್ ಧಾರವಾಡ.**

ಭತ್ತದ ಬೆಳೆಗೆ ಕೀಟದ ಬಾದೆ ಹೆಚ್ಚಾಗುತ್ತಿದ್ದು, ಪರಾವಲಂಬಿ ಕೀಟ ಮತ್ತು ರೈತನ ಸ್ನೇಹಿ ಕೀಟದ ಬಗ್ಗೆ ರೈತರಿಗೆ ತಿಳಿವಳಿಕೆ ನೀಡಲಾಗಿದೆ ಎಂದು ಗಂಗಾವತಿ ಕೃಷಿ ಪದವಿ ಮಹಾವಿದ್ಯಾಲಯದ ಸಹಾಯಕ ಪ್ರಾಧ್ಯಾಪಕ ಡಾ.ಪಿ.ಆರ್.ಬದ್ರಿಪ್ರಸಾದ್ ತಿಳಿಸಿದ್ದಾರೆ.

<><><><>

ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನ ಅಂಗವಾಗಿ ಬೆಂಗಳೂರಿನಲ್ಲಿ ಇಂದು ಕಾರ್ಮಿಕ ಇಲಾಖೆ ಸಹಯೋಗದೊಂದಿಗೆ ಜಾಥಾ ಕಾರ್ಯಕ್ರಮ ನಡೆಯಿತು. ಬಾಲಕಾರ್ಮಿಕ ಪದ್ಧತಿ ಸಾಮಾಜಿಕ ಪಿಡುಗಾಗಿದೆ. ಬಾಲಕಾರ್ಮಿಕರನ್ನು ದುಡಿಸಿಕೊಂಡವರಿಗೆ ಕಾನೂನಿನ ಅಡಿಯಲ್ಲಿ ಕಠಿಣ ಶಿಕ್ಷೆಗೆ ಗುರಿಪಡಿಸಲಾಗುವುದು ಎಂದು ಹಾಸನದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಬಿ.ಕೆ ದಾಕ್ಷಾಯಿಣಿ ತಿಳಿಸಿದ್ದಾರೆ. ದಾವಣಗೆರೆಯಲ್ಲಿ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ಅಂಗವಾಗಿ ದಾವಣಗೆರೆಯಲ್ಲಿಂದು ಹಮ್ಮಿಕೊಂಡಿದ್ದ ಜಾಗೃತಿ ಜಾಥಕ್ಕೆ ಜಿಲ್ಲಾ ಪ್ರಧಾನ ನ್ಯಾಯಾಧಿಶರಾದ ವೇಲಾ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಸಮುದಾಯದ ಸಹಭಾಗಿತ್ವದಿಂದ ಮಾತ್ರವೇ ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನೆ ಸಾಧ್ಯ ಎಂದು ಅಭಿಪ್ರಾಯಪಟ್ಟಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>